# ಕರ್ನಾಟಕ ವಿಧಾನ ಪರಿಷತ್ತು

<table>
<tr><td colspan="2">ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ</td><td>18 (68)</td></tr>
<tr><td colspan="2">ಸದಸ್ಯರ ಹೆಸರು</td><td>ಶ್ರೀ ಚಿದಾನಂದ ಎಂ.ಗೌಡ (ಪದವೀಧರರ ಕ್ಷೇತ್ರ)</td></tr>
<tr><td colspan="2">ಉತ್ತರಿಸಬೇಕಾದ ದಿನಾಂಕ</td><td>17-08-2026</td></tr>
<tr><td colspan="2">ಉತ್ತರಿಸಬೇಕಾದ ಸಚಿವರು</td><td>ಉನ್ನತ ಶಿಕ್ಷಣ ಸಚಿವರು</td></tr>
<tr><th colspan="2">ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರ ಸಂಖ್ಯೆ ಎಷ್ಟು; ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು;</td><td>ರಾಜ್ಯದ ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿ ಒಟ್ಟು 440 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ. ಅವುಗಳಲ್ಲಿ ಒಟ್ಟು 7187 ಸಹಾಯಕರ ಪ್ರಾಧ್ಯಾಪಕರ ಹುದ್ದೆಗಳು ಮಂಜೂರಾಗಿದ್ದು, ಇದರಲ್ಲಿ 5971 ಹುದ್ದೆಗಳು ಭರ್ತಿಯಾಗಿರುತ್ತವೆ. ಉಳಿದಂತೆ 1216 ಹುದ್ದೆಗಳು ಖಾಲಿ ಇರುತ್ತವೆ.</td></tr>
<tr><td>(ಆ)</td><td>2025-26 ನೇ ಸಾಲಿನಲ್ಲಿ ಎಷ್ಟು ಜನ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲಾಗಿತ್ತು; ಇವರಿಗೆ ನಿಗದಿಗೊಳಿಸಲಾಗಿದ್ದ ಅರ್ಹತೆಯೇನು;</td><td>2025-26 ನೇ ಸಾಲಿಗೆ ಒಟ್ಟು 11,100 ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳಲು ಕ್ರಮವಹಿಸಲಾಗಿದ್ದು, ಇದರಲ್ಲಿ ಆಯ್ಕೆಯಾದ ಒಟ್ಟು 11,010 ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲಾಗಿದೆ. ಅವರುಗಳಿಗೆ ನಿಗಧಿಪಡಿಸಲಾದ ಅರ್ಹತೆಗಳು ಈ ಕೆಳಕಂಡಂತಿದೆ.
<table>
<tr><th>ಕ್ರ. ಸಂ.</th><th>ವಿದ್ಯಾರ್ಹತೆ</th><th>ಗರಿಷ್ಠ ಅಂಕಗಳು</th></tr>
<tr><td>1.</td><td><u>ವಿದ್ಯಾರ್ಹತೆ:</u> ಅಭ್ಯರ್ಥಿಯು ಎರಡು ವರ್ಷ ಸ್ನಾತಕೋತ್ತರ ಪದವಿಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ 25% ಅನ್ನು ಗಣನೆಗೆ ತೆಗೆದುಕೊಳ್ಳುವುದು. (ಉದಾ: ಅಭ್ಯರ್ಥಿಯು ಸ್ನಾತಕೋತ್ತರ ಪದವಿಯಲ್ಲಿ ಶೇಕಡ 60 ಅಂಕ ಪಡೆದಿದ್ದಲ್ಲಿ ಆದರ ಶೇಕಡ 25ರಷ್ಟು ಭಾಗವನ್ನು ಅಂದರೆ 15 ಅಂಕಗಳು ಎಂಬುದಾಗಿ ಗಣನೆಗೆ ತೆಗೆದುಕೊಳ್ಳುವುದು).</td><td>25</td></tr>
<tr><td>2.</td><td><u>ಹೆಚ್ಚುವರಿ ವಿದ್ಯಾರ್ಹತೆ:</u><br>1) ಪಿಹೆಚ್.ಡಿ. ವಿದ್ಯಾರ್ಹತೆ ಪಡೆದಿದ್ದಲ್ಲಿ<br>2) ಎನ್ಇಟಿ/ಕೆ-ಸೆಟ್/ಎಸ್ಎಲ್ಇಟಿ ವಿದ್ಯಾರ್ಹತೆ ಪಡೆದಿದ್ದಲ್ಲಿ<br>3) ಎಂ. ಫಿಲ್. ವಿದ್ಯಾರ್ಹತೆ ಪಡೆದಿದ್ದಲ್ಲಿ</td><td>12<br>09<br>06</td></tr>
<tr><td>3.</td><td><u>ಅನುಭವ:</u> ಹಿಂದಿನ ವರ್ಷಗಳಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಅವಧಿಗೆ ಪ್ರತಿ ಶೈಕ್ಷಣಿಕ ವರ್ಷಕ್ಕೆ 3 ಅಂಕಗಳಂತೆ ಗರಿಷ್ಠ 16 ವರ್ಷಗಳಿಗೆ 48 ಅಂಕಗಳನ್ನು ಮಿತಿಗೊಳಿಸುವುದು.<br>ಸೇವೆಗೆ ಅಂಕಗಳನ್ನು ನಿರ್ಧರಿಸಲು ಪ್ರತಿ ಶೈಕ್ಷಣಿಕ ವರ್ಷದ 8 ತಿಂಗಳು ಮತ್ತು ಹೆಚ್ಚಿನ ಅವಧಿಯ (ಅಂದರೆ, ಶೈಕ್ಷಣಿಕ ವರ್ಷದಲ್ಲಿ 240 ದಿನಗಳ) ಸೇವೆಯನ್ನು ಒಂದು ವರ್ಷ ಎಂದು ಪರಿಗಣಿಸುವುದು. ಶೈಕ್ಷಣಿಕ ವರ್ಷದಲ್ಲಿನ 8ತಿಂಗಳಿಗಿಂತ ಕಡಿಮೆ ಅವಧಿಯ ಸೇವೆಯನು ಭಾಗಶಃ</td><td>48</td></tr>
</table>
</td></tr>
</table>

| | | |
|---|---|---|
| | | ವರ್ಷವೆಂದೂ ಪರಿಗಣಿಸಿ ಒಟ್ಟು ಸೇವಾವಧಿಗೆ ಪರಿಗಣಿಸುವುದು .<br>ಒಟ್ಟು 100<br>ಅರ್ಹ ವಿಕಲಚೇತನ ಅಭ್ಯರ್ಥಿಗಳಿಗೆ ಹೆಚ್ಚುವರಿಯಾಗಿ 10 ಅಂಕಗಳು. |
| (ಇ) | 2025-26 ರಲ್ಲಿ ನೇಮಕವಾಗಿದ್ದ ಅತಿಥಿ ಉಪನ್ಯಾಸಕರಲ್ಲಿ ಎಷ್ಟು ಜನ ನಕಲಿ ದಾಖಲೆ ಸಲ್ಲಿಸಿ ಅತಿಥಿ ಉಪನ್ಯಾಸಕರಾಗಿ ಆಯ್ಕೆಯಾಗಿದ್ದಾರೆ; ಇವರ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು; | 2025-26ನೇ ಶೈಕ್ಷಣಿಕ ಸಾಲಿನಲ್ಲಿ ಕರ್ತವ್ಯ ನಿರ್ವಹಿಸಿ, ದಾಖಲೆಗಳನ್ನು ಸಲ್ಲಿಸಿರುವ ಅತಿಥಿ ಉಪನ್ಯಾಸಕರಲ್ಲಿ ಅಧಿಕೃತ ಪರಿಶೀಲನಾ ಕಾರ್ಯವಿಧಾನದ (Standard Operating Procedure) (SOP) ಅನ್ವಯ ಕ್ರಮಬದ್ಧವಾಗಿರದ (ನಕಲಿ/ಅಮಾನ್ಯ) ದಾಖಲೆಗಳನ್ನು ಸಲ್ಲಿಸಿದ್ದ ಒಟ್ಟು 288 ಅತಿಥಿ ಉಪನ್ಯಾಸಕರನ್ನು ಪ್ರಸಕ್ತ 2026-27ನೇ ಸಾಲಿನ ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಯಿಂದ ಹೊರಗಿಡಲಾಗಿದೆ ಹಾಗೂ ಸರ್ಕಾರಕ್ಕೆ ಸುಳ್ಳು ಮಾಹಿತಿ/ದಾಖಲೆ ನೀಡಿ ವಂಚನೆ ಎಸಗಲು ಪ್ರಯತ್ನಿಸಿರುವುದರಿಂದ ಅವರುಗಳ ವಿರುದ್ಧ ಭಾರತ ನ್ಯಾಯ ಸಂಹಿತೆಯಡಿ ಅನ್ವಯವಾಗುವ ನಿಬಂಧನೆಗಳಡಿ ಸಂಬಂಧಪಟ್ಟ ಪೊಲೀಸ್ ಠಾಣೆಯಲ್ಲಿ ಕ್ರಿಮಿನಲ್ ಮೊಕದ್ದಮೆ ದಾಖಲಿಸಲು ಪ್ರಾಂಶುಪಾಲರಿಗೆ ಸೂಚಿಸಲಾಗಿರುತ್ತದೆ. |
| (ಈ) | ಈ ಹಿಂದೆ ನೇಮಕವಾಗಿದ್ದ ಎಷ್ಟು ಅತಿಥಿ ಉಪನ್ಯಾಸಕರ ದಾಖಲಾತಿಗಳನ್ನು ಪರಿಶೀಲನೆ ಮಾಡಲಾಗಿದೆ; ಮಾಡದೇ ಇದ್ದರೆ ಕಾರಣಗಳೇನು? | 2025-26ನೇ ಸಾಲಿನಲ್ಲಿ ಆನ್‌ಲೈನ್ ಕೌನ್ಸಲಿಂಗ್ ಮೂಲಕ ಕಾಲೇಜು ಆಯ್ಕೆ ಮಾಡಿಕೊಂಡು ಕರ್ತವ್ಯ ನಿರ್ವಹಿಸಿರುವ ಒಟ್ಟು 11,010 ಅತಿಥಿ ಉಪನ್ಯಾಸಕರುಗಳ ಸ್ನಾತಕೋತ್ತರ ಪದವಿ ಅಂಕಪಟ್ಟಿ ಮತ್ತು ಎನ್‌ಇಟಿ, ಎಸ್‌ಎಲ್‌ಇಟಿ, ಕೆ-ಎಸ್‌ಇಟಿ, ಪಿಹೆಚ್.ಡಿ, ಎಂ.ಫಿಲ್ ಹಾಗೂ ವಿಕಲಚೇತನ ಪ್ರಮಾಣ ಪತ್ರ ಮತ್ತು ಕಲ್ಯಾಣ ಕರ್ನಾಟಕ ಪ್ರಮಾಣ ಪತ್ರಗಳನ್ನು ಅಧಿಕೃತ ಪರಿಶೀಲನಾ ಕಾರ್ಯವಿಧಾನದ (Standard Operating Procedure) (SOP) ಅನ್ವಯ ಪ್ರಾಂಶುಪಾಲರ ಹಂತದಲ್ಲಿ ಪರಿಶೀಲನೆ ನಡೆಸಲಾಗಿರುತ್ತದೆ. ಅದರಂತೆ, ಬಹುತೇಕ ಅತಿಥಿ ಉಪನ್ಯಾಸಕರ ದಾಖಲೆಗಳನ್ನು ಕಾಲೇಜುಗಳ ಹಂತದಲ್ಲಿ ಪ್ರಾಂಶುಪಾಲರ ನೇತೃತ್ವದ ಸಮಿತಿಗಳು ಪರಿಶೀಲಿಸಿದ್ದು, ಕೆಲವು ಅತಿಥಿ ಉಪನ್ಯಾಸಕರು ರಾಜೀನಾಮೆ, ಗೈರು ಹಾಜರಿ, ಅನಾರೋಗ್ಯದ ಕಾರಣ ದಾಖಲೆಗಳನ್ನು ಸಲ್ಲಿಸದಿರುವ ಪ್ರಕರಣಗಳಲ್ಲಿ ಅಗತ್ಯ ದಾಖಲೆಗಳ ಕೊರತೆಯಿಂದಾಗಿ ಪರಿಶೀಲನೆ ನಡೆಸಿರುವುದಿಲ್ಲ. ಅಲ್ಲದೆ ಹೊರ ರಾಜ್ಯದ ವಿಶ್ವವಿದ್ಯಾಲಯಗಳ ವಿದ್ಯಾರ್ಹತೆ ಅಂಕ ಪಟ್ಟಿಗಳ ನೈಜತೆ ವರದಿಗಾಗಿ ಆಯಾ ವಿಶ್ವವಿದ್ಯಾಲಯಗಳಿಗೆ ಕಳುಹಿಸಲಾಗಿದ್ದು, ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. |
| (ಉ) | ಎಲ್ಲಾ ಹುದ್ದೆಗಳಿಗೆ ಖಾಯಂ ಉಪನ್ಯಾಸಕರನ್ನು ನೇಮಕ ಮಾಡಲು ಸರ್ಕಾರಕ್ಕೆ ಇರುವ ಸಮಸ್ಯೆಗಳು ಏನು; ವಿದ್ಯಾರ್ಥಿಗಳ | ಇಲಾಖೆಯಲ್ಲಿ ಒಟ್ಟು 7187 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳು ಮಂಜೂರಾಗಿದ್ದು, ಇದರಲ್ಲಿ 5971 ಹುದ್ದೆಗಳು ಭರ್ತಿಯಾಗಿರುತ್ತವೆ. ಉಳಿದಂತೆ 1216 ಹುದ್ದೆಗಳು ಖಾಲಿ ಇದ್ದು, ಈ |

| | | |
|---|---|---|
| | ಹಿತದೃಷ್ಟಿಯಿಂದ ಸರ್ಕಾರವು ಪ್ರಥಮ ದರ್ಜೆ ಕಾಲೇಜುಗಳಿಗೆ ಖಾಯಂ ಉಪನ್ಯಾಸಕರ ನೇಮಕಾತಿಯನ್ನು ಯಾವ ಕಾಲಮಿತಿಯಲ್ಲಿ ಮಾಡಲಾಗುವುದು; ಇದಕ್ಕಾಗಿ ಸರ್ಕಾರ ಕೈಗೊಂಡ ಕ್ರಮಗಳೇನು? | ಹುದ್ದೆಗಳಲ್ಲಿ ಪ್ರಸ್ತುತ 826 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಿದ್ದು, ಅದರಂತೆ ಸದರಿ 826 ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆ) (ಸಹಾಯಕ ಪ್ರಾಧ್ಯಾಪಕರ ನೇಮಕಾತಿ) (ವಿಶೇಷ) ನಿಯಮಗಳು, 2026 ಕರಡು ವಿಶೇಷ ನಿಯಮಗಳನ್ನು ರೂಪಿಸಲು ಕ್ರಮವಹಿಸಲಾಗುತ್ತಿದೆ. |

ಇಡಿ 258 ಡಿಸಿಇ 2026 (ಇ)

**(ಬಸವರಾಜ ರಾಯರೆಡ್ಡಿ)**
ಉನ್ನತ ಶಿಕ್ಷಣ ಸಚಿವರು